ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	380 (236)
2. ಸದಸ್ಯರ ಹೆಸರು	:	ಶ್ರೀ ಯು.ಬಿ. ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು)
3. ಉತ್ತರಿಸುವ ದಿನಾಂಕ	:	10.12.2020
4. ಉತ್ತರಿಸುವ ಸಚಿವರು	:	ಮುಖ್ಯಮಂತ್ರಿ

ಕ್ರಮ ಸಂಖ್ಯೆ	ಪ್ರಶ್ನೆ	ಉತ್ತರ
ಅ)	ಕರ್ನಾಟಕ ಲೋಕಸೇವಾ ಆಯೋಗವು 2014ನೇ ಸಾಲಿನ ಗೆಜೆಟೆಡ್ ಪ್ರೊಬೇಷನರಿ ಹುದ್ದೆಗಳ ಆಯ್ಕೆಯ ಪ್ರಕ್ರಿಯೆಯಲ್ಲಿ ತಾತ್ಕಾಲಿಕ ಆಯ್ಕೆಪಟ್ಟಿ ಪ್ರಕಟಿಸಿದ ನಂತರ ಆಯ್ಕೆಯಾದ ಮತ್ತು ಆಯ್ಕೆಯಾಗುವ ಎಲ್ಲಾ ಅಭ್ಯರ್ಥಿಗಳ ಮುಖ್ಯ ಪರೀಕ್ಷೆಯಲ್ಲಿ ವಿಷಯವಾರು ಅಂಕಗಳನ್ನು ಒಂದು ವಾರದೊಳಗಾಗಿ ಕೆ.ಪಿ.ಎಸ್.ಸಿ.ಯು ಅಭ್ಯರ್ಥಿಗಳ ಇಮೇಲ್ ಐಡಿಗಳಿಗೆ ಪಾಸ್ ವರ್ಡ್ ಪ್ರೊಟೆಕ್ಷನ್ ನೊಂದಿಗೆ ನೀಡಿರುವುದು ನಿಜವೇ;	ಹೌದು.
ಆ)	ಹಾಗಿದ್ದಲ್ಲಿ, 2015ನೇ ಸಾಲಿನ ಗೆಜೆಟೆಡ್ ಪ್ರೊಬೇಷನರಿ ಪರೀಕ್ಷೆಗೆ ಸಂಬಂಧಿಸಿದಂತೆ ತಾತ್ಕಾಲಿಕ ಆಯ್ಕೆಪಟ್ಟಿ ಪ್ರಕಟಿಸಿದ ಒಂದು ವಾರದ ನಂತರ ಕೇವಲ ಸಂದರ್ಶನಕ್ಕೆ ಆಯ್ಕೆಯಾದ ಅಭ್ಯರ್ಥಿಗಳಿಗೆ ಮಾತ್ರ ವಿಷಯವಾರು ಅಂಕಗಳನ್ನು ನೀಡದೇ, ಅವರು ಗಳಿಸಿದ ಒಟ್ಟು ಅಂಕಗಳನ್ನು ಮಾತ್ರ ನೀಡಲು ಕಾರಣಗಳೇನು :	ಕರ್ನಾಟಕ ಗೆಜೆಟೆಡ್ ಪ್ರೊಬೇಷನರ್ಸ್ (ಸ್ಪರ್ಧಾತ್ಮಕ ಪರೀಕ್ಷೆಗಳ ಮೂಲಕ ನೇಮಕಾತಿ) ನಿಯಮಗಳು 1997ರಲ್ಲಿ ಮುಖ್ಯ ಪರೀಕ್ಷೆಯ ಮತ್ತು ವ್ಯಕ್ತಿತ್ವ ಪರೀಕ್ಷೆಯ ಅಂಕಗಳನ್ನು ಅಂತಿಮ ಆಯ್ಕೆ ಪಟ್ಟಿಯೊಂದಿಗೆ ಪ್ರಕಟಿಸಲು ಅವಕಾಶವಿದೆ. ಆದಾಗ್ಯೂ ಸಹ ಆಯೋಗವು ಹೆಚ್ಚಿನ ಪಾರದರ್ಶಕತೆ ಕಾಪಾಡುವ ನಿಟ್ಟಿನಿಂದ ಪ್ರತಿ ಅಭ್ಯರ್ಥಿಗೆ ತಾನು ಗಳಿಸಿರುವ ಅಂಕಗಳನ್ನು Query Basis ಆಧಾರದ ಮೇಲೆ ಪಡೆಯಲು ಅವಕಾಶ ಕಲ್ಪಿಸಲಾಗಿದೆ ಎಂದು ಕರ್ನಾಟಕ ಲೋಕಸೇವಾ ಆಯೋಗವು ತಿಳಿಸಿರುತ್ತದೆ.
ಇ)	ವಿಷಯವಾರು ಅಂಕಗಳನ್ನು 67 ದಿನಗಳ ಸಮಯದ ನಂತರ ಅಭ್ಯರ್ಥಿಗಳಿಗೆ ಯಾವುದೇ ಪಾಸ್ ವಾರ್ಡ್ ಪ್ರೊಟೆಕ್ಷನ್ ಇಲ್ಲದೆ ಇ-ಮೇಲ್ ಮೂಲಕ ನೀಡಲಾಗಿದೆಯೇ;	ಇಲ್ಲ.
ಈ)	ವಿಷಯವಾರು ಅಂಕಗಳನ್ನು ನೀಡಲು ಇಷ್ಟು ಸುದೀರ್ಘ ಸಮಯ ತೆಗೆದುಕೊಳ್ಳಲು ಕಾರಣಗಳೇನು ?	ಗೆಜೆಟೆಡ್ ಪ್ರೊಬೇಷನರ್ಸ್ 1997 ನಿಯಮಗಳಲ್ಲಿ ಎಲ್ಲಿಯೂ ಅಭ್ಯರ್ಥಿಗಳ ವಿಷಯವಾರು ಅಂಕಗಳನ್ನು ನೀಡಲು ಅವಕಾಶವಿರುವುದಿಲ್ಲ. ಆದಾಗ್ಯೂ ಆಯೋಗವು ಆಯ್ಕೆ ಪ್ರಕ್ರಿಯೆಯಲ್ಲಿ ಹೆಚ್ಚಿನ ಪಾರದರ್ಶಕತೆ ಕಾಪಾಡಲು ಪ್ರತಿ ಅಭ್ಯರ್ಥಿಯ ವಿಷಯವಾರು ಅಂಕಗಳನ್ನು ನೀಡಲು Query Based Front End Application ಅನ್ನು N.I.C ವತಿಯಿಂದ ಅಭಿವೃದ್ಧಿಪಡಿಸಿ ಅಭ್ಯರ್ಥಿಗಳಿಗೆ ಅಂತಿಮ ಆಯ್ಕೆಪಟ್ಟಿ ಪ್ರಕಟಿಸಿದ ನಂತರ ನೀಡಲು ಕ್ರಮಕೈಗೊಳ್ಳಲಾಗಿರುತ್ತದೆ ಎಂದು ಕರ್ನಾಟಕ ಲೋಕಸೇವಾ ಆಯೋಗವು ತಿಳಿಸಿರುತ್ತದೆ.

ಸಂಖ್ಯೆ: ಸಿಆಸುಇ 108 ಎಸ್‌ಎಸ್‌ಸಿ 2020

(ಬಿ.ಎಸ್. ಯಡಿಯೂರಪ್ಪ)
ಮುಖ್ಯಮಂತ್ರಿ.